# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **392** |
| ಉತ್ತರಿಸಬೇಕಾದ ದಿನಾಂಕ | : | 21.12.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ರಹಿತರಿಗೆ ಸರ್ಕಾರದಿಂದ ಸಿಗುವ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರವು ವಸತಿ ರಹಿತರಿಗೆ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.<br>**ರಾಜ್ಯ ಸರ್ಕಾರದ ಯೋಜನೆಗಳು:**<br>• ಬಸವ ವಸತಿ ಯೋಜನೆ<br>• ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ ಮತ್ತು ನಗರ)<br>• ದೇವರಾಜ್ ಅರಸು ವಸತಿ ಯೋಜನೆ (ಗ್ರಾಮೀಣ ಮತ್ತು ನಗರ)<br>• ಮುಖ್ಯಮಂತ್ರಿಗಳ ಒಂದು ಲಕ್ಷ ಬಹುಮಹಡಿ ವಸತಿ ಯೋಜನೆ<br>**ಕೇಂದ್ರ ಪುರಸ್ಕೃತ ಯೋಜನೆಗಳು:**<br>• ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ ಮತ್ತು ನಗರ).<br>**ನಿವೇಶನ ಯೋಜನೆಗಳು :**<br>• ಮುಖ್ಯ ಮಂತ್ರಿಗಳ ಗ್ರಾಮೀಣ ನಿವೇಶನ ಯೋಜನೆ<br>• ಮುಖ್ಯ ಮಂತ್ರಿಗಳ ನಗರ ನಿವೇಶನ ಯೋಜನೆ. |
| ಆ) | ಗ್ರಾಮೀಣ ಭಾಗದ ಜನರು ಇನ್ನು ಕೂಡಾ ಗುಡಿಸಲಿನಲ್ಲಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಗುಡಿಸಲು ವಾಸಿಗಳನ್ನು ಒಳಗೊಂಡಂತೆ ಬಡತನ ರೇಖೆಗಿಂತ ಕೆಳಗಿರುವ ಎಲ್ಲಾ ವರ್ಗದ ವಸತಿ ರಹಿತರಿಗೆ ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನಕ್ಕೆ ಅನುಗುಣವಾಗಿ ಮೇಲ್ಕಂಡ ವಿವಿಧ ವಸತಿ ಯೋಜನೆಗಳ ಮೂಲಕ ವಸತಿ ಸೌಕರ್ಯವನ್ನು ಒದಗಿಸಲಾಗುತ್ತಿದೆ. ಪ್ರಸಕ್ತ ಸರ್ಕಾರದ ಅವಧಿಯಲ್ಲಿ ಒಟ್ಟು 4.27 ಲಕ್ಷ ಮನೆಗಳನ್ನು ನಿರ್ಮಿಸಲಾಗಿದೆ.<br>ರಾಜ್ಯದಲ್ಲಿ 2021-22ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ 5 ಲಕ್ಷ ಮನೆಗಳ ಗುರಿಯನ್ನು ಮಂಜೂರು ಮಾಡಲಾಗಿದ್ದು, ಫಲಾನುಭವಿಗಳ ಆಯ್ಕೆ,ಅನುಮೋದನೆ,ಅನುಷ್ಠಾನ ಪ್ರಕ್ರಿಯೆಗಳು ಪ್ರಗತಿಯಲ್ಲಿರುತ್ತದೆ. |
| ಇ) | ವಸತಿ ಯೋಜನೆಯಲ್ಲಿ ಫಲಾನುಭವಿಯಾಗಿ ಮನೆಗಳನ್ನು ವಾಸಯೋಗ್ಯ ಸ್ಥಳವಲ್ಲದ ಕಡೆ ನಿರ್ಮಿಸಿ ದುರುಪಯೋಗಪಡಿಸಿ ಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮವೇನು ? | ವಸತಿ ಯೋಜನೆಗಳಡಿ ಆಯ್ಕೆಯಾದ ಸ್ವಂತ ನಿವೇಶನ ಹೊಂದಿರಬೇಕಾಗಿದ್ದು, ನಿಯಮಾನುಸಾರ ನಿವೇಶನದ ಬಗ್ಗೆ ಸೂಕ್ತ ದಾಖಲೆಗಳನ್ನು ಹೊಂದಿರುವ ಫಲಾನುಭವಿಗಳನ್ನು ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಸಭೆಯ ಮೂಲಕ, ನಗರ ಪ್ರದೇಶದಲ್ಲಿ ಆಶ್ರಯ ಸಮಿತಿ ಮೂಲಕ ಆಯ್ಕೆಗೊಳಿಸಿ ಅನುಷ್ಠಾನಗೊಳಿಸಲು ವಸತಿ ಮಾರ್ಗಸೂಚಿಯಲ್ಲಿ ತಿಳಿಸಲಾಗಿರುತ್ತದೆ.<br>ಫಲಾನುಭವಿಗಳು ಒಂದು ವೇಳೆ ವಾಸಯೋಗ್ಯ ಸ್ಥಳವಲ್ಲದ ಕಡೆ ನಿರ್ಮಿಸಿ ದುರುಪಯೋಗಪಡಿಸಿಕೊಳ್ಳುತ್ತಿರುವುದು ಕಂಡು ಬಂದಲ್ಲಿ ಅಥವಾ ಅನರ್ಹರೆಂದು ಕಂಡು ಬಂದಲ್ಲಿ ಅನುಷ್ಠಾನಾಧಿಕಾರಿಗಳು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ವಇ 04 ಹೆಚ್‌ಎವೈ 2018, ದಿನಾಂಕ:30.01.2019 ರಲ್ಲಿ ಅನುಷ್ಠಾನಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ. |

ಸಂಖ್ಯೆ :ವಇ 520 ಹೆಚ್‌ಎಎಂ 2022

**(ವಿ. ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು